ಪ್ರಜಾವಾಣಿ

# 2422 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ

ಬೆಂಗಳೂರು: ಜೈನ್ ವಿಶ್ವವಿದ್ಯಾಲಯವು ಇತ್ತೀಚೆಗೆ ಆಯೋಜಿಸಿದ್ದ 4ನೇ ಘಟಿಕೋತ್ಸವ ಸಮಾರಂಭದಲ್ಲಿ ವಿವಿಧ ವಿಭಾಗಗಳ 2422 ವಿದ್ಯಾರ್ಥಿಗಳಿಗೆ ಪದವಿ ಪ್ರದಾನ ಮಾಡಲಾಯಿತು.

ವಿವಿಧ ವಿಭಾಗಗಳಲ್ಲಿ ರ‍್ಯಾಂಕ್ ಪಡೆದ 53 ವಿದ್ಯಾರ್ಥಿಗಳಿಗೆ ಇದೇ ಸಂದರ್ಭದಲ್ಲಿ ಚಿನ್ನದ ಪದಕ ನೀಡಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ಮಾತನಾಡಿದ ವಿಜ್ಞಾನಿ ಡಾ.ವಿ.ಕೆ.ಸಾರಸ್ವತ್, 'ವಿಜ್ಞಾನ ಮತ್ತು ತಂತ್ರಜ್ಞಾನವು ಜನ ಜೀವನದ ಮೇಲೆ ಅದ್ಭುತ ಪ್ರಭಾವ ಬೀರಿದೆ. ಬಾಹ್ಯಾಕಾಶ ಹಾಗೂ ಕ್ಷಿಪಣಿ ಕ್ಷೇತ್ರದಲ್ಲಿನ ಅಗಾಧ ಬೆಳವಣಿಗೆ ವೈಜ್ಞಾನಿಕ ಭಾರತದ ಪರಿಕಲ್ಪನೆಯ ಕನಸಿಗೆ ಮುನ್ನುಡಿ ಬರೆದಿದೆ. ಜೊತೆಗೆ ಔದ್ಯೋಗಿಕ ಅವಕಾಶಗಳನ್ನು ಯುವಪೀಳಿಗೆಗೆ ಸೃಷ್ಟಿಸಿದೆ' ಎಂದರು.

ಕಾರ್ಯಕ್ರಮದಲ್ಲಿ ಜೈನ್ ವಿ.ವಿ ಕುಲಾಧಿಪತಿ ಡಾ.ಸಿ.ಜಿ.ಕೃಷ್ಣದಾಸ್ ನಾಯರ್, ಕುಲಪತಿ ಡಾ.ಎನ್.. ಸುಂದರರಾಜನ್, ಕುಲಸಚಿವ ಪ್ರೊ.ಎನ್.ವಿ.ಎಚ್ ಕೃಷ್ಣನ್, ಉಪ ಕುಲಪತಿ ಡಾ.ಸಂದೀಪ್ ಶಾಸ್ತ್ರಿ ಇದ್ದರು.